13)	ಯಂಕಚಿಮಣಿನಾಗರ	ಏಪ್ರಿಲ್	1994
14)	ಕಾಕನೂರ	ಆಗಸ್ಟ್	1995
15)	ನೀರಬೂದಿಹಾಳ	ಆಗಸ್ಟ್	1995
16)	ಕಾಗಲಗೊಂಬ	ಆಗಸ್ಟ್	1995

ಆ) ಬೇಡಿಕೆ ಬಂದಲ್ಲಿ ಸದರಿ ಗ್ರಾಮಗಳಿಗೆ 1996-97ನೇ ಸಾಲಿನಲ್ಲಿ ಆದ್ಯತೆಯ ಮೇಲೆ ಪರಿಗಣಿಸಲಾಗುವುದು.

ಬಾದಾಮಿ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ

709 - ಶ್ರೀ ಬಿ.ಬಿ. ಚಿಮ್ಮನಕಟ್ಟಿ (ಬಾದಾಮಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಾದಾಮಿ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯಾತ್ಮಕ ಹಳ್ಳಿಗಳಿಗೆ ರೂ. 20.00 ಲಕ್ಷ ರೂಪಾಯಿಗಳ ವಿಶೇಷ ಅನುದಾನ ಬಿಡುಗಡೆ ಮಾಡಲು ಸರ್ಕಾರ ಒಪ್ಪಿದೆಯೇ?

ಆ) ಮಂತ್ರಿಗಳ ಆದೇಶದಂತೆ ಜಿಲ್ಲಾ ಪಂಚಾಯತಿಯವರು ಕಳುಹಿಸಿರುವ ಪ್ರಸ್ತಾವನೆಗೆ ಸರ್ಕಾರ ಶೀಘ್ರವಾಗಿ ಮಂಜೂರಾತಿ ನೀಡಿ, ಕೆಲಸ ಪ್ರಾರಂಭಿಸುತ್ತದೆಯೇ?

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಮತ್ತು ಆ) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ, ಜಿಲ್ಲಾ ಪಂಚಾಯತ್, ಬಿಜಾಪುರ ಇವರು ಕಳಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗುತ್ತಿದೆ.

ಆರ್.ಇ.ಸಿ. ಸ್ಕೀಮ್‌ನಲ್ಲಿ ಭಟ್ಕಳ ತಾಲ್ಲೂಕಿನ ವಿದ್ಯುತ್ತೀಕರಣದ ಕುರಿತು

711 - ಶ್ರೀ ಡಾ॥ ಯು. ಚಿತ್ತರಂಜನ್ (ಭಟ್ಕಳ) : ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೇಂದ್ರ ಸರ್ಕಾರದ ಆರ್.ಇ.ಸಿ. ಸ್ಕೀಮ್‌ನ ಆನ್ವಯ ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ತಾಲ್ಲೂಕಿಗೆ ಮಂಜೂರಾದ ಹಣವೆಷ್ಟು? ಎಷ್ಟು ಹಣ ಖರ್ಚಾಗಿದೆ?

ಆ) ಗ್ರಾಮಾಂತರದಲ್ಲಿರುವ ಮಜರ್‌ಗಳಿಗೆ (ಹಾಮ್ಲೆಟ್ ಎಲೆಕ್ಟ್ರಿಫಿಕೇಷನ) ವಿದ್ಯುತ್ ಪೂರೈಸಲು ಈ ಯೋಜನೆಯನ್ವಯ ಅಂದಾಜು ಪತ್ರಗಳನ್ನು ಸಿಬ್ಬಂದಿ ಕೊರತೆಯಿಂದಾಗಿ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಇದನ್ನು ಸರಿಪಡಿಸಲು ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ಕೆ. ಪಾಟೀಲ್ (ಉಪಮುಖ್ಯ ಮಂತ್ರಿಗಳು) :

ಅ) ಭಟ್ಕಳ ತಾಲ್ಲೂಕಿನಲ್ಲಿ ಆರ್.ಇ.ಸಿ. ಸ್ಕೀಮ್‌ನಲ್ಲಿ ಮಜರೆಗಳ ವಿದ್ಯುದ್ಧೀಕರಣಕ್ಕಾಗಿ ರೂ. 113.53 ಲಕ್ಷದ ಅಂದಾಜು ವೆಚ್ಚದ ಒಂದು ಹೊಸ ಯೋಜನೆಯನ್ನು ರೂಪಿಸಿ ಅದನ್ನು ಮಂಜೂರಾತಿಗಾಗಿ ಗ್ರಾಮೀಣ ವಿದ್ಯುದ್ಧೀಕರಣ ನಿಗಮ, ದೆಹಲಿರವರಿಗೆ ಕಳುಹಿಸಿದ್ದು ಮಂಜೂರಾತಿಯನ್ನು ನಿರೀಕ್ಷಿಸಲಾಗಿದೆ.